ಶ್ರೀ ಎಂ.ವೈ. ಘೋರ್ಪಡೆ (ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಸಚಿವರು) :

1) ಗ್ರಾಮ ಪಂಚಾಯತಿ ನೌಕರರು ಸರ್ಕಾರಿ ನೌಕರರಲ್ಲವೆಂದು ಸರ್ಕಾರದ ಆದೇಶ ಸಂಖ್ಯೆ ಗ್ರಾಅಪ 102 ಪಿಇಎಲ್ 90 ದಿನಾಂಕ 10-1-94ರಲ್ಲಿ ಸ್ಪಷ್ಟಪಡಿಸಲಾಗಿದೆ. ಹಾಗೂ ಇವರುಗಳು ಗ್ರಾಂ.ಪಂ. ನೌಕರರಾಗಿರುತ್ತಾರೆ. ಇವರನ್ನು ಖಾಯಂಗೊಳಿಸುವ ಬಗ್ಗೆ ಸರ್ಕಾರದ ಕ್ರಮ ಉದ್ಭವಿಸುವುದಿಲ್ಲ.

2) ಅನ್ವಯಿಸುವುದಿಲ್ಲ.

ಹೊಸದಾಗಿ ಇಂಜಿನಿಯರಿಂಗ್ ಕಾಲೇಜುಗಳಿಗೆ ಪರವಾನಿಗೆ

2946 - ಶ್ರೀ ಪಿ.ಜಿ.ಆರ್. ಸಿಂಧ್ಯ (ಕನಕಪುರ) : ಮಾನ್ಯ ಉನ್ನತ ಶಿಕ್ಷಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ರಾಜ್ಯದಲ್ಲಿ ಹೊಸದಾಗಿ ಇಂಜಿನಿಯರಿಂಗ್ ಕಾಲೇಜುಗಳಿಗೆ ಅನುಮತಿ ನೀಡುವ ಉದ್ದೇಶ ಸರ್ಕಾರದವರಿಗೆ ಇದೆಯೇ?

ಆ) ಹಾಗಿದ್ದಲ್ಲಿ ಈ ವರ್ಷ ಎಷ್ಟು ಇಂಜಿನಿಯರಿಂಗ್ ಕಾಲೇಜುಗಳಿಗೆ ಅನುದಾನ ನೀಡಲು ಎಐಟಿಯುಸಿಗೆ ಶಿಫಾರಸ್ಸು ಮಾಡಲಾಗಿದೆ? (ವಿವರಗಳನ್ನು ನೀಡುವುದು)

ಡಾ॥ ಜಿ. ಪರಮೇಶ್ವರ್ (ಉನ್ನತ ಶಿಕ್ಷಣ ಸಚಿವರು) :

ಅ) ಹೌದು.

ಆ) ಈ ಕೆಳಕಂಡ ಏಳು ಕಾಲೇಜುಗಳನ್ನು ಎಐಸಿಟಿಇಯ ಅನುಮೋದನೆಗಾಗಿ ಶಿಫಾರಸ್ಸು ಮಾಡಲಾಗಿದೆ.

1) ಪಿಎ ಕಾಲೇಜ್ ಆಫ್ ಇಂಜಿನಿಯರಿಂಗ್ ಕೈರಣ್‌ಗಲ್ ಬಂಟವಾಳ್ ತಾಲ್ಲೂಕು

2) ಅಟ್ರಿಯ ಇನ್ಸ್‌ಟಿಟ್ಯೂಟ್ ಆಫ್ ಟಕ್ನಾಲಜಿ, ಬೆಂಗಳೂರು

3) ಸಿಎಂಆರ್ ಇನ್ಸ್‌ಟಿಟ್ಯೂಟ್ ಆಫ್ ಟೆಕ್ನಾಲಜಿ, ಬೆಂಗಳೂರು

4) ಸಿಕ್ಯಾಬ್ ಇನ್ಸ್‌ಟಿಟ್ಯೂಟ್ ಆಫ್ ಟೆಕ್ನಾಲಜಿ, ಬಿಜಾಪುರ.

(5) ಆಕ್ಸ್‌ಫರ್ಡ್ ಕಾಲೇಜ್ ಆಫ್ ಇಂಜಿನಿಯರಿಂಗ್ ಬೊಮ್ಮನಹಳ್ಳಿ, ಬೆಂಗಳೂರು

(6) ಬೆಂಗಳೂರು ಕಾಲೇಜ್ ಆಫ್ ಇಂಜಿನಿಯರಿಂಗ್ ಅಂಡ್ ಟೆಕ್ನಾಲಜಿ, ಚಂದಾಪುರ, ಅನೇಕಲ್ ತಾ: ಬೆಂಗಳೂರು ಜಿಲ್ಲೆ.

(7) ಆಚಾರ್ಯ ಇನ್ಸ್‌ಟಿಟ್ಯೂಟ್ ಆಫ್ ಟೆಕ್ನಾಲಜಿ, ಶಿವನಪುರ ವಿಲೇಜ್ ದಾಸನಪುರ ಹೋಬಳಿ, ಬೆಂಗಳೂರು ಅರ್ಬನ್ ಡಿಸ್ಟ್ರಿಕ್ಟ್.